Akashvani : Bangalore
Regional Bulletin In Kannada
24.09.2024 / 18.40 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ನ್ಯಾಯಾಲಯದ ಆದೇಶ ಕುರಿತಂತೆ ಕಾನೂನು ತಜ್ಞರೊಂದಿಗೆ ಚರ್ಚಿಸಿ ಮುಂದಿನ ನಿರ್ಧಾರ - ಮುಖ್ಯಮಂತ್ರಿ ಸಿದ್ದರಾಮಯ್ಯ
- ಮುಡಾ ಪ್ರಕರಣ ; ಸಿಬಿಐ ತನಿಖೆಗೆ ಬಿಜೆಪಿ ಆಗ್ರಹ ; ಮುಖ್ಯಮಂತ್ರಿ ರಾಜೀನಾಮೆಗೆ ಒತ್ತಾಯ
- ಬೆಂಗಳೂರಿನಲ್ಲಿ ಸಂಚಾರ ದಟ್ಟಣೆ ನಿಯಂತ್ರಿಸಲು ಸುರಂಗ ರಸ್ತೆ ನಿರ್ಮಾಣಕ್ಕೆ ಸರ್ಕಾರ ಆದ್ಯತೆ
- ಬೆಂಗಳೂರು-ಧಾರವಾಡ ವಂದೇ ಭಾರತ್ ರೈಲು ಬೆಳಗಾವಿ ವಿಸ್ತರಿಸುವಂತೆ ಸಂಸದ ಜಗದೀಶ್ ಶೆಟ್ಟರ್ ಆಗ್ರಹ

<><*<><>*><>

ಕಾಂಗ್ರೆಸ್ ಸರ್ಕಾರ ಅಭದ್ರಗೊಳಿಸಿ, ಕಪ್ಪು ಮಸಿ ಬಳಿಯಲು ಬಿಜೆಪಿ ಜೆಡಿಎಸ್ ನಡೆಸುತ್ತಿರುವ ಪ್ರಯತ್ನಕ್ಕೆ ಸೋಲು ಖಚಿತ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಮುಡಾ ಪ್ರಕರಣಕ್ಕೆ ಸಂಬಂಧಿಸಿದಂತೆ ಉಚ್ಚ ನ್ಯಾಯಾಲಯದ ಆದೇಶ ಹೊರಬಂದ ಬಳಿಕ ಸುದ್ದಿಗೋಷ್ಠಿ ನಡೆಸಿದ ಅವರು, ಕಾನೂನು ತಜ್ಞರೊಂದಿಗೆ ಚರ್ಚಿಸಿ ಮುಂದಿನ ಕ್ರಮ ಎಂದು ಹೇಳಿದ್ದಾರೆ. ಮುಡಾ ಪ್ರಕರಣಕ್ಕೆ ಸಂಬಂಧಿಸಿದಂತೆ, ಬಿಎನ್‌ಎಸ್‌ಎಸ್ ಪ್ರಕಾರ ೨೧೮ ಹಾಗೂ ಪಿಸಿ ಕಾಯ್ದೆ ೧೯ರಂತೆ ತನಿಖೆಗೆ ಅನುಮತಿ ನೀಡುವುದನ್ನು ತಿರಸ್ಕರಿಸಿ, ಪಿಸಿ ಕಾಯ್ದೆಯ ೧೭ಎ ಪ್ರಕಾರ ತನಿಖೆಗೆ ಉಚ್ಚನ್ಯಾಯಾಲಯ ಆದೇಶ ನೀಡಿದೆ. ಈ ತೀರ್ಪಿನ ವಿರುದ್ಧ ಕಾನೂನು ಹೋರಾಟದ ಬಗ್ಗೆ ಕಾನೂನು ತಜ್ಞರೊಂದಿಗೆ ಚರ್ಚಿಸುವುದಾಗಿ ತಿಳಿಸಿದರು. ಬಿಜೆಪಿ ಜೆಡಿಎಸ್ ಪಿತೂರಿಗೆ ಬೆದರಲ್ಲ ಎಂದ ಮುಖ್ಯಮಂತ್ರಿಯವರು, ರಾಜಭವನ ದುರುಪಯೋಗ ಹಾಗೂ ದುರ್ಬಳಕೆಗೂ ಹೆದರುವುದಿಲ್ಲ. ರಾಜ್ಯದ ಜನ, ಪಕ್ಷದ ಹೈಕಮಾಂಡ್, ಶಾಸಕರು, ಸಚಿವರು, ಕಾರ್ಯಕರ್ತರು ಜೊತೆಗಿದ್ದಾರೆ. ಕಾನೂನು ಹೋರಾಟಕ್ಕೆ ಹೈಕಮಾಂಡ್ ಸಹಕಾರ ನೀಡಲಿದೆ ಎಂದು ಸ್ಪಷ್ಟಪಡಿಸಿದರು. ನರೇಂದ್ರ ಮೋದಿಯವರ ಬಿಜೆಪಿ ಸರ್ಕಾರ, ಕೇವಲ ತಮ್ಮ ಮೇಲಷ್ಟೇ ಅಲ್ಲ, ಇಡೀ ದೇಶದ ವಿರೋಧಪಕ್ಷಗಳ ವಿರುದ್ಧ ಸೇಡಿನ ರಾಜಕೀಯ ಮಾಡುತ್ತಿದೆ ಎಂದು ಆರೋಪಿಸಿದರು. ಇದೇ ವೇಳೆ ಮಾತನಾಡಿದ ಡಿ.ಕೆ. ಶಿವಕುಮಾರ್, ಇಡೀ ಪಕ್ಷ ಮತ್ತು ಸರ್ಕಾರ

ಮುಖ್ಯಮಂತ್ರಿಯವರ ಜೊತೆ ನಿಲ್ಲಲಿದೆ ಎಂದು ಹೇಳಿದ್ದಾರೆ. ಬಿಜೆಪಿ-ಜೆಡಿಎಸ್ ಕುತಂತ್ರಕ್ಕೆ ನಮ್ಮ ಸರ್ಕಾರ ಜಗ್ಗುವುದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಈ ಪ್ರಕರಣದ ಕುರಿತಂತೆ ಕಾನೂನು ಹೋರಾಟ ಮಾಡುವುದಾಗಿ ತಿಳಿಸಿದ್ದಾರೆ.

<><*<><>*><>

ಮೈಸೂರಿನ ಮುಡಾ ಬಿಡಿ ನಿವೇಶನ ಹಂಚಿಕೆ ಪ್ರಕರಣದಲ್ಲಿ ತಮ್ಮ ವಿರುದ್ಧ ರಾಜ್ಯಪಾಲರು ದಾವೆ ಹೂಡಲು ಅನುಮತಿ ನೀಡಿರುವುದನ್ನು ಪ್ರಶ್ನಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ಸಲ್ಲಿಸಿದ್ದ ಅರ್ಜಿಯನ್ನು ರಾಜ್ಯ ಹೈಕೋರ್ಟ್ ವಜಾಗೊಳಿಸಿದೆ. ಇದರಿಂದ ವಿಚಾರಣೆಗೆ ತಡೆ ನೀಡುವಂತೆ ಕೋರಿ ಮುಖ್ಯಮಂತ್ರಿ ಸಲ್ಲಿಸಿದ್ದ ಮನವಿಯನ್ನು ನ್ಯಾಯಾಲಯ ತಿರಸ್ಕರಿಸಿದೆ. ರಾಜ್ಯಪಾಲರು ವಿಚಾರಣೆಗೆ ನೀಡಿದ ಅನುಮತಿ ಕ್ರಮಬದ್ಧವಾಗಿದೆ ಎಂದು ನ್ಯಾಯಪೀಠ ಹೇಳಿದೆ. ನ್ಯಾಯಮೂರ್ತಿ ನಾಗಪ್ರಸನ್ನ ನೇತೃತ್ವದ ಏಕಸದಸ್ಯ ನ್ಯಾಯಪೀಠ ಇಂದು ತೀರ್ಪು ಪ್ರಕಟಿಸಿದ್ದು, ರಾಜ್ಯಪಾಲರು ಯಾವುದೇ ಲೋಪ ಎಸಗಿಲ್ಲ. ಅರ್ಜಿದಾರರು ದಾವೆ ಹೂಡುವಂತೆ ನೀಡಿದ ಅನುಮತಿ ಸರಿಯಾಗಿದೆ ಎಂದು ತೀರ್ಪು ಪ್ರಕಟಿಸಿದೆ.

ಅರ್ಜಿದಾರರ ಪರವಾಗಿ ಸರ್ವೋಚ್ಚ ನ್ಯಾಯಾಲಯದ ಹಿರಿಯ ವಕೀಲ ಅಭಿಷೇಕ್ ಮನುಸಿಂಘ್ವಿ, ರವಿವರ್ಮಕುಮಾರ್ ವಾದ ಮಂಡಿಸಿದ್ದರು. ರಾಜ್ಯಪಾಲರ ಪರ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ವಕಾಲತ್ತು ವಹಿಸಿದ್ದರು.

<><*<><>*><>

ಮುಡಾ ಪ್ರಕರಣದ ಆರೋಪಿಯಾಗಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ಸ್ಥಾನಕ್ಕೆ ಕೂಡಲೇ ರಾಜೀನಾಮೆ ನೀಡಬೇಕು ಎಂದು ಕೇಂದ್ರ ಸಚಿವ ಹಾಗೂ ಬಿಜೆಪಿ ಹಿರಿಯ ನಾಯಕ ಪ್ರಲ್ಹಾದ್ ಜೋಶಿ ಆಗ್ರಹಿಸಿದ್ದಾರೆ. ಪ್ರಕರಣದ ತನಿಖೆಯನ್ನು ಸಿಬಿಐಗೆ ಒಪ್ಪಿಸಬೇಕೆಂದು ಒತ್ತಾಯಿಸಿದ್ದಾರೆ. ರಾಜ್ಯಪಾಲರ ನಿರ್ಣಯ ಎತ್ತಿಹಿಡಿದ ಉಚ್ಚನ್ಯಾಯಾಲಯದ ಆದೇಶಕ್ಕೆ ಪ್ರತಿಕ್ರಿಯೆ ನೀಡಿದ ಅವರು, ರಾಜ್ಯಪಾಲರ ವಿರುದ್ಧ ಸುಳ್ಳು ಆರೋಪ ಮಾಡಿದ ಕಾಂಗ್ರೆಸ್ ನಾಯಕರಿಗೆ ನ್ಯಾಯಾಂಗದ ಮೇಲೆ ವಿಶ್ವಾಸವಿದೆಯೇ ಎಂದು ಪ್ರಶ್ನಿಸಿದರು. ಬಿಜೆಪಿ ಎಂದಿಗೂ ಸರ್ಕಾರ ಉರುಳಿಸುವ ಪ್ರಯತ್ನ ಮಾಡಿಲ್ಲ ಎಂದು ಸ್ಪಷ್ಟಪಡಿಸಿದರು.

<><*<><>*><>

ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ತನಿಖೆಗೆ ಆದೇಶ ನೀಡಿದ ರಾಜ್ಯಪಾಲರ ಕ್ರಮ ಎತ್ತಿ ಹಿಡಿದಿರುವ ಹೈಕೋರ್ಟ್ ತೀರ್ಪು ಸ್ವಾಗತಾರ್ಹ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ತಿಳಿಸಿದ್ದಾರೆ. ಕಾನೂನಿನ ಮೇಲೆ ನಂಬಿಕೆ ಇದ್ದರೆ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ

ನೀಡುವಂತೆ ಆಗ್ರಹಿಸಿದ್ದಾರೆ. ಇನ್ನೊಂದೆಡೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಮಾತನಾಡಿ, ಇದು ಬೆಂಗಳೂರು-ಮೈಸೂರು ಪಾದಯಾತ್ರೆ ಹೋರಾಟಕ್ಕೆ ಸಂದ ಮೊದಲ ಜಯ ಎಂದು ತಿಳಿಸಿದ್ದಾರೆ. ರಾಜ್ಯದ ಅಭಿವೃದ್ಧಿ ದೃಷ್ಟಿಯಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಕೂಡಲೇ ರಾಜೀನಾಮೆ ನೀಡಬೇಕೆಂದು ವಿಜಯೇಂದ್ರ ಒತ್ತಾಯಿಸಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಸಲ್ಲಿಸಿದ ಅರ್ಜಿಯನ್ನು ಹೈಕೋರ್ಟ್ ವಜಾ ಗೊಳಿಸಿರುವುದು ಸ್ವಾಗತಾರ್ಹ ಎಂದು ವಿಧಾನ ಪರಿಷತ್ ಸದಸ್ಯ ಸಿ.ಟಿ ರವಿ  ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ. ನ್ಯಾಯಾಲಯದ ತೀರ್ಪಿಗೆ ಎಲ್ಲರೂ ತಲೆ ಬಾಗಬೇಕು ಎಂದು ಹೇಳಿದ್ದಾರೆ.

<><*<><>*><>

ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಹೈಕೋರ್ಟ್ ತೀರ್ಪು ಪ್ರಕಟವಾಗುತ್ತಿದ್ದಂತೆ ಮೈಸೂರಿನಲ್ಲಿ ವಿಧಾನಪರಿಷತ್ ಸದಸ್ಯ ಚಲವಾದಿ ನಾರಾಯಣಸ್ವಾಮಿ ನೇತೃತ್ವದಲ್ಲಿ ಬಿಜೆಪಿ ಕಾರ್ಯಕರ್ತರು ಪ್ರತಿಭಟನೆ ನಡೆಸಿದರು. ಈ ವೇಳೆ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆಗೆ ಒತ್ತಾಯಿಸಿದ್ದಾರೆ. ನ್ಯಾಯಾಲಯದಿಂದ ನಿರ್ದೋಷಿ ಎಂದು ತೀರ್ಪು ನೀಡಿದ ಮೇಲೆ ಅಧಿಕಾರಕ್ಕೆ ಬನ್ನಿ ಎಂದು ಪ್ರತಿಭಟನಾಕಾರರು ಆಗ್ರಹಿಸಿದ್ದಾರೆ. ಬೆಳಗಾವಿಯಲ್ಲಿಯೂ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆಗೆ ಒತ್ತಾಯಿಸಿ ಬಿಜೆಪಿ ಮುಖಂಡರು ಹಾಗೂ ಕಾರ್ಯಕರು ಪ್ರತಿಭಟನೆ ನಡೆಸಿದರು. ವೀರರಾಣಿ ಕಿತ್ತೂರು ಚೆನ್ನಮ್ಮ ವೃತ್ತದಲ್ಲಿ ಬಿಜೆಪಿ ರಾಜ್ಯ ಉಪಾಧ್ಯಕ್ಷ ಅನಿಲ ಬೆನಕೆ, ಮಾಜಿ ಶಾಸಕ ಸಂಜಯ ಪಾಟೀಲ, ಸೇರಿದಂತೆ ಪಕ್ಷದ ಪದಾಧಿಕಾರಿಗಳು, ಕಾರ್ಯಕರ್ತರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು. ಇನ್ನೊಂದೆಡೆ ಮುಖ್ಯಮಂತ್ರಿ ಸಿದ್ದರಾಮಯ್ಯ ಪರ ಮೈಸೂರಿನಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಬಿಜೆಪಿ ನಾಯಕರ ವಿರುದ್ಧ ಆಕ್ರೋಶ ವ್ಯಕ್ತಪಡಿಸಿ ಪ್ರತಿಭಟನೆ ನಡೆಸಿದರು. ರಾಜ್ಯಪಾಲರ ಕ್ರಮ ಸರಿಯಿಲ್ಲ ಎಂದು ಹೇಳಿದ ಪ್ರತಿಭಟನಾಕಾರರು ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ವಿರುದ್ಧ ಪೋಸ್ಕೊ ಪ್ರಕರಣವಿದ್ದು, ಅವರನ್ನು ಬಂಧಿಸುವಂತೆ ಒತ್ತಾಯಿಸಿದರು.

<><*<><>*><>

ದೇಶದಲ್ಲಿ ಜನಸಂಖ್ಯೆ, ವಾಹನಗಳ ಸಂಖ್ಯೆ ಎರಡೂ ಹೆಚ್ಚುತ್ತಿದ್ದು ಜೀವ ಉಳಿಸಲು ರಸ್ತೆ ಸುರಕ್ಷತೆ ತಂತ್ರಜ್ಞಾನ ಆಧುನಿಕ ಕಾಲದಲ್ಲಿ ಅವಶ್ಯಕವಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಭಿಪ್ರಾಯಪಟ್ಟಿದ್ದಾರೆ. ಭಾರತೀಯ ಆಟೋಮೊಬೈಲ್ ತಯಾರಕರ ಒಕ್ಕೂಟ 'ನಮ್ಮ ರಸ್ತೆಗಳು ನಮ್ಮ ಜವಾಬ್ದಾರಿ' ವಿಚಾರದ ಮೇಲೆ ಹಮ್ಮಿಕೊಂಡಿದ್ದ ವಾರ್ಷಿಕ ಸಮ್ಮೇಳನದಲ್ಲಿ ಮಾತನಾಡಿದ ಅವರು ಅಂತರರಾಷ್ಟ್ರೀಯ ರಸ್ತೆ ಸುರಕ್ಷತೆ ಮಾದರಿ ನಮ್ಮಲ್ಲೂ ಬರಬೇಕು" ಎಂದು ತಿಳಿಸಿದ್ದಾರೆ. ಶೇಕಡಾ ೨೦-೨೫ ರಷ್ಟು ಜನ ಮಾತ್ರ ಸಾರ್ವಜನಿಕ ಸಾರಿಗೆ ಬಳಸುತ್ತಿದ್ದು, ರಸ್ತೆ ಸುರಕ್ಷತೆ ಅಗತ್ಯ

ಎಂದರು. ಕರ್ನಾಟಕ ಜನಸಂಖ್ಯೆ ಏಳು ಕೋಟಿಯಿದ್ದು. ಒಟ್ಟು ಮೂರು ಕೋಟಿ ವಾಹನಗಳಿವೆ. ಬೆಂಗಳೂರಿನ ಜನಸಂಖ್ಯೆ ೧ ಕೋಟಿ ೫೦ ಲಕ್ಷ ಇದ್ದರೆ, ವಾಹನ ಸಂಖ್ಯೆ ೧ ಕೋಟಿ ೪ ಲಕ್ಷವಿದೆ. "ದೆಹಲಿ ಹಾಗೂ ಇತರೆ ನಗರಗಳಂತೆ ಬೆಂಗಳೂರು ಯೋಜಿತ ನಗರವಲ್ಲ. ಸಂಚಾರದಟ್ಟಣೆ ಇಲ್ಲಿನ ಪ್ರಮುಖ ಸಮಸ್ಯೆಯಾಗಿದ್ದು ಪೆರಿಫೆರಲ್ ರಿಂಗ್ ರೋಡ್ ಹಾಗೂ ಸುರಂಗ ರಸ್ತೆ ನಿರ್ಮಾಣಕ್ಕೆ ನಮ್ಮ ಸರ್ಕಾರ ಮುಂದಾಗಿದೆ" ಎಂದು ಸ್ಪಷ್ಟಪಡಿಸಿದರು.

<><*<><>*><>

ಹುಬ್ಬಳ್ಳಿಯ ನೈರುತ್ಯ ರೈಲ್ವೆಯ ಪ್ರಧಾನ ವ್ಯವಸ್ಥಾಪಕರು ಹಾಗೂ ರೈಲ್ವೆ ಇಲಾಖೆಯ ಅಧಿಕಾರಿಗಳೊಂದಿಗೆ ಇಂದು ಬೆಳಗಾವಿ ಸಂಸದ ಜಗದೀಶ ಶೆಟ್ಟರ್, ಸಭೆ ನಡೆಸಿದರು. ಬೆಳಗಾವಿ-ಕಿತ್ತೂರು-ಧಾರವಾಡ ನೂತನ ರೈಲ್ವೆ ಮಾರ್ಗದ ಕುರಿತು ಹಾಗೂ ಪ್ರಸ್ತುತ ಯೋಜನೆಯ ಪ್ರಗತಿ ಬಗ್ಗೆ ಮಾಹಿತಿ ಪಡೆದ ಮಾಹಿತಿ ಪಡೆದ ಅವರು, ಶೀಘ್ರದಲ್ಲಿ ಕಾಮಗಾರಿ ಪ್ರಾರಂಭಿಸುವಂತೆ ಸೂಚಿಸಿದರು. ಬೆಂಗಳೂರು ಧಾರವಾಡ ವಂದೇ ಭಾರತ್ ರೈಲನ್ನು ಬೆಳಗಾವಿವರೆಗೆ ವಿಸ್ತರಿಸುವ ಕುರಿತಂತೆ ಅಧಿಕಾರಿಗಳಿಂದ ಮಾಹಿತಿ ಪಡೆದರು. ಬೆಳಗಾವಿ - ಮಿರಜ್ - ಬೆಳಗಾವಿ ನಡುವೆ ಪ್ಯಾಸೆಂಜರ್ ರೈಲು ಸೇವೆಯನ್ನು ಸಾರ್ವಜನಿಕರ ಅನುಕೂಲಕ್ಕಾಗಿ ಮುಂದುವರಿಸುವಂತೆ ಸೂಚಿಸಿದರು.

<><*<><>*><>

ಸ್ವಚ್ಛತಾ ಹೀ ಸೇವಾ ಪಾಕ್ಷಿಕ ಅಭಿಯಾನದ ಅಂಗವಾಗಿ ಚಿತ್ರದುರ್ಗ ನಗರಸಭೆ ವತಿಯಿಂದ ನಗರದ ಐತಿಹಾಸಿಕ ಕೋಟೆ ಆವರಣದೊಳಗೆ ಸ್ವಚ್ಛತಾ ಕಾರ್ಯ ನಡೆಯಿತು. ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಸ್ವಚ್ಛತಾ ಕಾರ್ಯಕ್ಕೆ ಚಾಲನೆ ನೀಡಿ, ಕೋಟೆ ಆವರಣದೊಳಗೆ ಸ್ವಚ್ಛತಾ ಕಾರ್ಯಕ್ರಮದಲ್ಲಿ ಪಾಲ್ಗೊಂಡರು. ಸ್ವಚ್ಛತಾ ಕಾರ್ಯಕ್ಕೆ ಆಗಮಿಸಿದ್ದ ಇತರೆ ಅಧಿಕಾರಿಗಳು, ವಿದ್ಯಾರ್ಥಿಗಳು, ಸಾರ್ವಜನಿಕರು, ವಾಯುವಿಹಾರಿಗಳು, ಪ್ರವಾಸಿಗರು ಕೋಟೆ ಆವರಣದಲ್ಲಿನ ಸ್ವಚ್ಛತೆಗೆ ಕೈಜೋಡಿಸಿದರು. ಈ ವೇಳೆ ಮಾತನಾಡಿದ ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿನ ಜನರಲ್ಲಿ ನೈರ್ಮಲ್ಯ ಶುಚಿತ್ವ ಕುರಿತು ಅರಿವು ಮೂಡಿಸಲು ಕಳೆದ ಸೆಪ್ಟೆಂಬರ್ ೧೪ ರಿಂದ “ಸ್ವಚ್ಛತಾ ಹೀ ಸೇವಾ ಪಾಕ್ಷಿಕ” ಅಭಿಯಾನ ಆರಂಭಗೊಂಡಿದ್ದು, ಅಕ್ಟೋಬರ್ ೧ ರವರಗೆ ನಡೆಯಲಿದೆ. ಈ ಹಿನ್ನಲೆಯಲ್ಲಿ ಪ್ರತಿನಿತ್ಯವೂ ಸ್ವಚ್ಛತಾ ಅಭಿಯಾನಕ್ಕಾಗಿ ವಿವಿಧ ಕಾರ್ಯಕ್ರಮಗಳನ್ನು ಜಿಲ್ಲೆಯಾದ್ಯಂತ ಆಯೋಜಿಸಲಾಗುತ್ತಿದೆ ಎಂದು ಹೇಳಿದರು.

<><*<><>*><>

ರೈತರು ಕೇಂದ್ರ ಸರ್ಕಾರದ ಕೃಷಿ ಯೋಜನೆ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೂವಿನ ಹಡಗಲಿಯ ಶಾಸಕ ಕೃಷ್ಣ ನಾಯಕ್ ಹೇಳಿದ್ದಾರೆ. ವಿಜಯನಗರದಲ್ಲಿ ವಿವಿಧ ಇಲಾಖೆಗಳ ಸಹಯೋಗದಲ್ಲಿ ಏರ್ಪಡಿಸಲಾಗಿದ್ದ ಪೋಷಣ್ ಅಭಿಯಾನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಕೇಂದ್ರ ಸರ್ಕಾರದ ಯೋಜನೆಗಳಾದ ಸೂರ್ಯಘರ್, ವಿಕಸಿತ ಭಾರತ್ ಬಜೆಟ್ ಮತ್ತು ಹೊಸ ಕ್ರಿಮಿನಲ್ ಕಾನೂನುಗಳ ಬಗ್ಗೆ ಮಾಹಿತಿ ನೀಡಿದರು. ಕಾರ್ಯಕ್ರಮದಲ್ಲಿ ಅಂಗನವಾಡಿಯ ಕಾರ್ಯಕರ್ತೆಯರು ಪಾಲ್ಗೊಂಡು, ಸಮಗ್ರ ಶಿಶು ಅಭಿವೃದ್ಧಿ ಯೋಜನೆಯ ಭಿತ್ತಿ ಚಿತ್ರಗಳನ್ನು ಧಾನ್ಯಗಳ ಮೂಲಕ ಬಿಡಿಸಿ ಜನರಿಗೆ ಪೌಷ್ಠಿಕತೆಯ ಮಾಹಿತಿ ನೀಡಿದರು. ಅಂಗನವಾಡಿ ಹಾಗೂ ಸ್ವಸಹಾಯ ಗುಂಪುಗಳಿಂದ ಪೌಷ್ಠಿಕ ಆಹಾರದ ಮೇಳಗಳನ್ನು ಆಯೋಜಿಸಲಾಗಿತ್ತು.

<><*<><>*><>

ದೈಹಿಕ ಮತ್ತು ಮಾನಸಿಕ ಸದೃಢತೆಗೆ ಕ್ರೀಡೆಗಳು ಸಹಕಾರಿಯಾಗಿವೆ ಎಂದು ಚಿಕ್ಕಬಳ್ಳಾಪುರ ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ ಅಭಿಪ್ರಾಯಪಟ್ಟಿದ್ದಾರೆ. ಸರ್. ಎಂ. ವಿಶ್ವೇಶ್ವರಯ್ಯ ಕ್ರೀಡಾಂಗಣದಲ್ಲಿ ಜಿಲ್ಲಾ ಮಟ್ಟದ ದಸರಾ ಕ್ರೀಡಾಕೂಟವನ್ನು ಉದ್ಘಾಟಿಸಿ ಮಾತನಾಡಿದ ಅವರು, ಇತ್ತೀಚಿನ ದಿನಗಳಲ್ಲಿ ಭಾರತದ ಕ್ರೀಡಾಪಟುಗಳು ಒಲಿಂಪಿಕ್ಸ್, ಪ್ಯಾರಾಲಿಂಪಿಕ್ಸ್ ಸೇರಿದಂತೆ ಅಂತಾರಾಷ್ಟ್ರೀಯ ಮಟ್ಟದ ಹಲವು ಕ್ರೀಡಾಕೂಟಗಳಲ್ಲಿ ಗಮನಾರ್ಹ ಸಾಧನೆ ಮಾಡುತ್ತಿದ್ದಾರೆ. ದಸರಾ ಕ್ರೀಡಾಕೂಟಗಳು ಗ್ರಾಮೀಣ ಕ್ರೀಡಾ ಪ್ರತಿಭೆಗಳ ಬೆಳವಣಿಗೆಗೆ ಸಹಕಾರಿ ಎಂದು ತಿಳಿಸಿದರು.

<><*<><>*><>

ಸಂಕ್ಷಿಪ್ತ ಸುದ್ದಿಗಳು

೧. ರೈತರ ಪಂಪ್ ಸೆಟ್‌ಗಳಿಗೆ ಆಧಾರ್ ಸಂಖ್ಯೆ ಜೋಡಣೆ ಮಾಡುತ್ತಿರುವ ರಾಜ್ಯ ಸರ್ಕಾರ ರೈತ ವಿರೋಧಿ ನೀತಿ ಹಾಗೂ ಕೃಷಿ ಕ್ಷೇತ್ರದ ವಿವಿಧ ಸಮಸ್ಯೆಗಳನ್ನು ಖಂಡಿಸಿ ಇದೇ ೨೬ ರಂದು ಕರ್ನಾಟಕ ರಾಜ್ಯ ರೈತ ಸಂಘ ಮತ್ತು ಹಸಿರುಸೇನೆ ವತಿಯಿಂದ ಚಿಕ್ಕಬಳ್ಳಾಪುರ ಜಿಲ್ಲಾಡಳಿತ ಭವನದ ಎದುರು ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ರೈತ ಸಂಘ ಮತ್ತು ಹಸಿರು ಸೇನೆಯ ಜಿಲ್ಲಾ ಘಟಕ ತಿಳಿಸಿದೆ.

೨. ಪ್ರಸಕ್ತ ಸಾಲಿಗೆ ಸಮಾಜ ಕಲ್ಯಾಣ ಇಲಾಖೆಯಿಂದ ಗದಗ ಜಿಲ್ಲೆಯ ಪರಿಶಿಷ್ಟ ಜಾತಿಯ ಕಾನೂನು ಪದವೀಧರರಿಗೆ ವೃತ್ತಿ ತರಬೇತಿ ಅವಧಿಯಲ್ಲಿ ಶಿಷ್ಯವೇತನ ಪಾವತಿಸುವ

ಕಾರ್ಯಕ್ರಮದಡಿ ಅರ್ಹ ಕಾನೂನು ಪದವೀಧರರನ್ನು ಆಯ್ಕೆಮಾಡಲು ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಇದೇ ೩೦ ಕೊನೆಯ ದಿನವಾಗಿದೆ.

೩. ದಕ್ಷಿಣ ಕನ್ನಡ ಚೆಸ್ ಅಸೋಸಿಯೇಷನ್ ವತಿಯಿಂದ ರಾಷ್ಟ್ರೀಯ ಓಪನ್ ರ್‍ಯಾಪಿಡ್ ರೇಟೆಡ್ ಚೆಸ್ ಪಂದ್ಯಾಟ ಅಕ್ಟೋಬರ್ ೨ ಮತ್ತು ೩ ರಂದು ನಡೆಯಲಿದೆ ಎಂದು ಅಸೋಸಿಯೇಷನ್‌ನ ಅಧ್ಯಕ್ಷ ರಮೇಶ್ ಕೋಟೆ ತಿಳಿಸಿದ್ದಾರೆ.

೪. ಕರಿಮೆಣಸು ಬೆಳೆ ಮೇಲೆ ಸರ್ಕಾರ ಜಿಎಸ್‌ಟಿ ವಿಧಿಸಿರುವುದರಿಂದಾಗಿ ಬೆಳೆಗಾರರಿಗೆ ಸಮಸ್ಯೆ ಹೆಚ್ಚಾಗಿದ್ದು, ಕೇಂದ್ರ ಸರ್ಕಾರ ಜಿಎಸ್‌ಟಿಯನ್ನು ತೆಗೆದುಹಾಕುವಂತೆ ಕೊಡಗು ಪ್ಲಾಂಟರ್ಸ್ ಅಸೋಸಿಯೇಷನ್‌ನ ನಿರ್ದೇಶಕ ತೇಲಪಂಡ ಪೂವಯ್ಯ ಮಡಿಕೇರಿಯಲ್ಲಿ ಒತ್ತಾಯಿಸಿದ್ದಾರೆ.

<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>

<><*<> ನಮ್ಮ ಮುಂದಿನ ವಾರ್ತಾಪ್ರಸಾರ ರಾತ್ರಿ ೭.೩೫ ಕ್ಕೆ <>*><>